ಕರ್ನಾಟಕ ಸರ್ಕಾರ

ಸಂಖ್ಯೆ: ಗ್ರಾಅಪ 384 ಗ್ರಾಪಂಕಾ 2018(ಭಾಗ-1)

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ: 25.02.2019

## ಅಧಿಕೃತ ಜ್ಞಾಪನ

ವಿಷಯ: ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಹಾಗೂ ಇಲಾಖೆಯ ಅಂಗಸಂಸ್ಥೆಗಳಲ್ಲಿ ಅನ್ಯಕಾರ್ಯನಿಮಿತ್ತ ಮತ್ತು ನಿಯೋಜನೆ ಮೇಲೆ ಕಾರ್ಯನಿರ್ವಹಿಸುತ್ತಿರುವ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳ ನಿಯೋಜನೆ ರದ್ದುಪಡಿಸಿ, ಮೂಲ ಸ್ಥಳಗಳಿಗೆ ಹಿಂದಿರುಗಿಸುವ ಬಗ್ಗೆ.

***

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಸಚಿವಾಲಯ ಹಾಗೂ ಇಲಾಖೆಯ ಅಂಗಸಂಸ್ಥೆಗಳಲ್ಲಿ ಅನ್ಯಕಾರ್ಯನಿಮಿತ್ತ ಮತ್ತು ನಿಯೋಜನೆ ಮೇಲೆ ಕಾರ್ಯನಿರ್ವಹಿಸುತ್ತಿರುವ ಕೆಳಕಂಡ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳ ನಿಯೋಜನೆ/ಅನ್ಯ ಕಾರ್ಯನಿಮಿತ್ತ ನೇಮಿಸಿರುವುದನ್ನು ತಕ್ಷಣದಿಂದ ಜಾರಿಗೆ ಬರುವಂತೆ ರದ್ದುಪಡಿಸಿ ಆದೇಶಿಸಿದೆ ಹಾಗೂ ಸದರಿಯವರನ್ನು ದಿನಾಂಕ 25.02.2019ರಂದು ಅಪರಾಹ್ನ ಕಾರ್ಯವಿಮುಕ್ತಿಗೊಳಿಸಿದೆ. ಸದರಿ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳನ್ನು ಅವರು ಕರ್ತವ್ಯ ನಿರ್ವಹಿಸುತ್ತಿದ್ದ ಮೂಲ ಗ್ರಾಮ ಪಂಚಾಯತಿಗಳ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಹುದ್ದೆಗೆ ಅಥವಾ ಖಾಲಿ ಇರುವ ಗ್ರಾಮ ಪಂಚಾಯತಿಗೆ ಸ್ಥಳ ನಿಯುಕ್ತಿಗೊಳಿಸಿ ಸರ್ಕಾರಕ್ಕೆ ವರದಿ ಸಲ್ಲಿಸಲು ಸಂಬಂಧಪಟ್ಟ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಈ ಮೂಲಕ ತಿಳಿಸಿದೆ.

| ಕ್ರ. ಸಂ. | ಪಂಚಾಯತಿ ಅಭಿವೃದ್ಧಿ ಅಧಿಕಾರಿ ಹೆಸರು ಮತ್ತು ಜಿಲ್ಲೆ | ನಿಯೋಜನೆ/ಅನ್ಯ ಕಾರ್ಯನಿಮಿತ್ತ ಕಾರ್ಯನಿರ್ವಹಿಸುತ್ತಿರುವ ಇಲಾಖೆಯ ಶಾಖೆ/ಕಛೇರಿ |
|---|---|---|
| 1 | ದಿನೇಶ್ ಕುಮಾರ್ ಬಿ., ಮಂದಗೆರೆ ಗ್ರಾಮ ಪಂಚಾಯತಿ, ಕೆ.ಆರ್.ಪೇಟೆ ತಾಲ್ಲೂಕು, ಮಂಡ್ಯ ಜಿಲ್ಲೆ | ಗ್ರಾಮ ಪಂಚಾಯತಿ ಶಾಖೆ |
| 2 | ಧೃತಿಲಕ್ಷ್ಮಿ, ಹೆಚ್.ಬಸಾಪುರ ಗ್ರಾಮ ಪಂಚಾಯತಿ ಮಳವಳ್ಳಿ ತಾಲ್ಲೂಕು, ಮಂಡ್ಯ ಜಿಲ್ಲೆ | ಪಶ್ಚಿಮ ಘಟ್ಟಗಳ ಅಭಿವೃದ್ಧಿ ಶಾಖೆ |
| 3 | ಶೋಭಾ ಜಿ. ಎಸ್., ಸೋಮನಹಳ್ಳಿ ಗ್ರಾಮ ಪಂಚಾಯತಿ,ಮದ್ದೂರು ತಾಲ್ಲೂಕು, ಮಂಡ್ಯ ಜಿಲ್ಲೆ | ಪಿ.ಎಂ.ಐ. ಶಾಖೆ |

ಸದರಿ ನೌಕರರು ಸಂಬಂಧಿಸಿದ ಜಿಲ್ಲಾ ಪಂಚಾಯತಿಗಳಲ್ಲಿ ದಿನಾಂಕ 26.02.2019ರಂದು ಪೂರ್ವಾಹ್ನ ಕರ್ತವ್ಯಕ್ಕೆ ವರದಿ ಮಾಡಿಕೊಳ್ಳಲು ಸೂಚಿಸಿದೆ.

25/2/19

(ಮುಬಾರಕ್ ಅಹ್ಮದ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಪ್ರತಿ:

1) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಮಂಡ್ಯ ಜಿಲ್ಲಾ ಪಂಚಾಯತಿ, ಮಂಡ್ಯ
2) ನಿರ್ದೇಶಕರು(ಪಂ.ರಾಜ್-1), ಜಿಲ್ಲಾ ಪಂಚಾಯತಿ ಶಾಖೆ, ಗ್ರಾ.ಅ. ಮತ್ತು ಪಂ.ರಾಜ್ ಇಲಾಖೆ
3) ನಿರ್ದೇಶಕರು, ಪಶ್ಚಿಮ ಘಟ್ಟಗಳ ಯೋಜನೆ, ಗ್ರಾ.ಅ. ಮತ್ತು ಪಂ.ರಾಜ್ ಇಲಾಖೆ

4) ನಿರ್ದೇಶಕರು, ಪಿ.ಎಂ.ಐ.ಶಾಖೆ, ಗ್ರಾ.ಅ. ಮತ್ತು ಪಂ.ರಾಜ್ ಇಲಾಖೆ
5) ಸಂಬಂಧಪಟ್ಟ ತಾಲ್ಲೂಕು ಪಂಚಾಯತಿಯ ಕಾರ್ಯನಿರ್ವಾಹಕ ಅಧಿಕಾರಿಗಳು.
6) ಸಂಬಂಧಿಸಿದ ನೌಕರರಿಗೆ.
7) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.

**ಪ್ರತಿಯನ್ನು ಮಾಹಿತಿಗಾಗಿ:**

1) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸ ಸೌಧ.
2) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರ ಆಪ್ತ ಕಾರ್ಯದರ್ಶಿ.
3) ಸರ್ಕಾರದ ಕಾರ್ಯದರ್ಶಿಗಳು(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರ ಆಪ್ತ ಕಾರ್ಯದರ್ಶಿ.